**ಕರ್ನಾಟಕ ಲೋಕಸೇವಾ ಆಯೋಗ**
**"ಉದ್ಯೋಗ ಸೌಧ" ಬೆಂಗಳೂರು-560 001.**

ಸಂಖ್ಯೆ: ಇ(2)1026/2024-25/ಪಿಎಸ್‌ಸಿ ದಿನಾಂಕ: 22-11-2024

**ತಿದ್ದುಪಡಿ ಅಧಿಸೂಚನೆ**

**ಉಲ್ಲೇಖ:** 1. ಅಧಿಸೂಚನೆ ಸಂಖ್ಯೆ:ಇ(2)581/2023-24/ಪಿಎಸ್‌ಸಿ, ದಿನಾಂಕ:29.02.2024.
2. ಸೇರ್ಪಡೆ ಅಧಿಸೂಚನೆ ಸಂಖ್ಯೆ: ಇ(2)1023/2024-25/ಪಿಎಸ್‌ಸಿ, ದಿನಾಂಕ:22.11.2024.

*****

ಆಯೋಗವು 2023-24ನೇ ಸಾಲಿನ ಗ್ರೂಪ್-ಸಿ ವೃಂದದ ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯಲ್ಲಿನ "ಭೂಮಾಪಕರು" ಉಳಿಕೆ ಮೂಲ ವೃಂದದ-264 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಉಲ್ಲೇಖಿತ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯ ಕ್ರಮ ಸಂಖ್ಯೆ:13ರಲ್ಲಿ ಗರಿಷ್ಠ ವಯೋಮಿತಿಯನ್ನು "ಸಾಮಾನ್ಯ ಅರ್ಹತೆ-35 ವರ್ಷಗಳು, ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ- 38 ವರ್ಷಗಳು ಮತ್ತು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1- 40 ವರ್ಷಗಳು" ಎಂದು ನಿಗದಿಪಡಿಸಲಾಗಿತ್ತು.

ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 166 ಸೆನೆನಿ 2024, ದಿನಾಂಕ:10.09.2024ರಲ್ಲಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿರುತ್ತದೆ.

***"ರಾಜ್ಯ ಸಿವಿಲ್ ಸೇವೆಗಳಲ್ಲಿನ ವಿವಿಧ ಇಲಾಖೆಗಳ ಗ್ರೂಪ್-ಸಿ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಈಗಾಗಲೇ ಹೊರಡಿಸಲಾಗಿರುವ ಅಧಿಸೂಚನೆಗಳಿಗೆ ಹಾಗೂ ಮುಂದಿನ ಒಂದು ವರ್ಷದಲ್ಲಿ ಹೊರಡಿಸಲಿರುವ ಅಧಿಸೂಚನೆಗಳಿಗೆ ಸಂಬಂಧಿಸಿದಂತೆ, ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ (one time measure) ಗರಿಷ್ಠ ವಯೋಮಿತಿಯಲ್ಲಿ 3 ವರ್ಷಗಳ ಸಡಿಲಿಕೆಯನ್ನು ನೀಡಿ ಆದೇಶಿಸಿದೆ."***

ಮೇಲ್ಕಂಡ ಸರ್ಕಾರದ ಆದೇಶದನ್ವಯ ಸದರಿ ಹುದ್ದೆಗಳಿಗೆ ನಿಗದಿಪಡಿಸಲಾಗಿದ್ದ, ವಯೋಮಿತಿಯನ್ನು ಕೆಳಕಂಡಂತೆ ಮಾರ್ಪಾಡು ಮಾಡಲಾಗಿದೆ.

**ವಯೋಮಿತಿ:**

ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಆಯಾ ಮೀಸಲಾತಿಗಳ ಮುಂದೆ ನಮೂದಿಸಿರುವ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಟ ವಯೋಮಿತಿಯನ್ನು ಮೀರಿರಬಾರದು.

| | | |
|---|---|---|
| ವಯೋಮಿತಿ, ವಯಸ್ಸು ವರ್ಷಗಳಲ್ಲಿ | ಕನಿಷ್ಠ-18 ವರ್ಷಗಳು | |
| | ಸಾಮಾನ್ಯ ಅರ್ಹತೆ-ಗರಿಷ್ಠ | 38 ವರ್ಷಗಳು |
| | ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ - ಗರಿಷ್ಠ | 41 ವರ್ಷಗಳು |
| | ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1- ಗರಿಷ್ಠ | 43 ವರ್ಷಗಳು |

ಸರ್ಕಾರದ ಮೇಲ್ಕಂಡ ಆದೇಶದ ಹಿನ್ನೆಲೆಯಲ್ಲಿ ಗ್ರೂಪ್-ಸಿ ವೃಂದದ "ಭೂಮಾಪಕರ" ಹುದ್ದೆಗಳ ಅಧಿಸೂಚನೆ ದಿನಾಂಕ:29.02.2024 ಮತ್ತು ಸೇರ್ಪಡೆ ಅಧಿಸೂಚನೆ ದಿನಾಂಕ:22.11.2024ರ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ (one time measure) ಗರಿಷ್ಠ ವಯೋಮಿತಿಯಲ್ಲಿ 3 ವರ್ಷಗಳ ಸಡಿಲಿಕೆಯನ್ನು ನೀಡಿ ಅರ್ಹ ಅಭ್ಯರ್ಥಿಗಳು **ದಿನಾಂಕ:25.11.2024 ರಿಂದ 09.12.2024ರವರೆಗೆ** ಅರ್ಜಿ ಸಲ್ಲಿಸಲು ಕಾಲಾವಕಾಶವನ್ನು ಕಲ್ಪಿಸಲಾಗಿರುತ್ತದೆ.

**ವಿಶೇಷ ಸೂಚನೆ:-**

1. **ಈ ಹಿಂದೆ ತಾಂತ್ರಿಕ ಕಾರಣದಿಂದ ಅರ್ಜಿ ಸಲ್ಲಿಸಲು ಹಾಗೂ ಶುಲ್ಕ ಪಾವತಿ ಮಾಡಲು ಸಾಧ್ಯವಾಗದ ಅಭ್ಯರ್ಥಿಗಳು ಸಹ ಅರ್ಜಿ ಸಲ್ಲಿಸಬಹುದು.**
2. **ವಯೋಮಿತಿಯನ್ನು ಹೊರತುಪಡಿಸಿ ಉಳಿದಂತೆ, ಆಯೋಗದ ಅಧಿಸೂಚನೆ ಸಂಖ್ಯೆ:ಇ(2)581/2023-24/ಪಿಎಸ್‌ಸಿ, ದಿನಾಂಕ:29.02.2024ರಲ್ಲಿ ತಿಳಿಸಲಾಗಿರುವ ಮಾಹಿತಿ/ವಿವರಗಳನ್ನು ಯಥಾವತ್ತಾಗಿ ಅನ್ವಯಿಸಿಕೊಳ್ಳತಕ್ಕದ್ದು ಹಾಗೂ ಹೆಚ್ಚಿನ ವಿವರಗಳಿಗಾಗಿ ಸದರಿ ಅಧಿಸೂಚನೆಯನ್ನು ಓದಿಕೊಳ್ಳತಕ್ಕದ್ದು.**
3. **ಪರಿಷ್ಕೃತ ಪರೀಕ್ಷಾ ದಿನಾಂಕಗಳನ್ನು ನಂತರದಲ್ಲಿ ಪ್ರಕಟಿಸಲಾಗುವುದು.**

**ಸಹಿ/-**
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.